**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**17.09.2026 19.35 hrs**

---

ಮುಖ್ಯಾಂಶಗಳು

೧. ವ್ಯಕ್ತಿಯಿಂದ ವ್ಯಕ್ತಿಗೆ ಮಾಡುವ ಎಲ್ಲಾ ಯುಪಿಐ ವಹಿವಾಟುಗಳು ಉಚಿತ - ಕೇಂದ್ರ ಸರ್ಕಾರ ಸ್ಪಷ್ಟನೆ

೨. ಭೂತಾನ್ ಪ್ರಧಾನಿಯೊಂದಿಗೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಮಾತುಕತೆ

೩. ಪ್ರಧಾನಿ ನರೇಂದ್ರ ಮೋದಿ ೭೬ನೇ ಜನ್ಮ ದಿನ; ವಿಶ್ವ ನಾಯಕರಿಂದ ಶುಭಾಶಯ

೪. ದೇಶದಲ್ಲಿ ಡಾಪ್ಲರ್ ಹವಾಮಾನ ರೇಡಾರ್‌ಗಳ ಸಂಖ್ಯೆ ಐವತ್ತೊಂದಕ್ಕೆ ಏರಿಕೆ - ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್

೫. ಟಿ-೨೦ ಕ್ರಿಕೆಟ್: ಭಾರತ ವಿರುದ್ಧ ಟಾಸ್ ಗೆದ್ದ ಅಫ್ಘಾನಿಸ್ತಾನ ತಂಡ ಫೀಲ್ಡಿಂಗ್ ಆಯ್ಕೆ

---

ವ್ಯಕ್ತಿಯಿಂದ ವ್ಯಕ್ತಿಗೆ ಮಾಡುವ ಎಲ್ಲಾ UPI ವಹಿವಾಟುಗಳು ಉಚಿತವಾಗಿ ಮುಂದುವರಿಯಲಿದ್ದು, ಸ್ನೇಹಿತರಿಗೆ ಹಣ ಕಳುಹಿಸಲು, ಅಂಗಡಿಗಳಲ್ಲಿ ಪಾವತಿಸಲು ಅಥವಾ ಯಾವುದೇ ಶುಲ್ಕವಿಲ್ಲದೆ QR ಕೋಡ್ ಅನ್ನು ಸ್ಕ್ಯಾನ್ ಮಾಡಲು ಸಾಧ್ಯವಾಗುತ್ತದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

UPI QR ಕೋಡ್‌ಗಳ ಮೂಲಕ ತಿಂಗಳಿಗೆ ಒಂದು ಲಕ್ಷ ರೂಪಾಯಿಗಳವರೆಗೆ ಗಳಿಸುವ ಮಾರಾಟಗಾರರು ಶೂನ್ಯ ಶುಲ್ಕಗಳನ್ನು ಪಡೆಯುವುದನ್ನು ಮುಂದುವರಿಸುತ್ತಾರೆ. ಎಲ್ಲಾ RuPay ಡೆಬಿಟ್ ಕಾರ್ಡ್ ಲಿಂಕ್ ಮಾಡಲಾದ UPI ವಹಿವಾಟುಗಳು ಸಹ ಯಾವುದೇ ಶುಲ್ಕವಿಲ್ಲದೆ ಮುಂದುವರಿಯುತ್ತವೆ

ಮೂಲಗಳ ಪ್ರಕಾರ, ವ್ಯಕ್ತಿಯಿಂದ ವ್ಯಾಪಾರಿಗೆ UPI ವಹಿವಾಟುಗಳಲ್ಲಿ ಸುಮಾರು ೯೬ ಪ್ರತಿಶತದಷ್ಟು ಯಾವುದೇ ಪರಿಣಾಮ ಬೀರುವುದಿಲ್ಲ. ರೈಲ್ವೆ, ಇಂಧನ ಮತ್ತು ಇತರ ಅಗತ್ಯ ವಲಯಗಳಲ್ಲಿ ಎರಡು ಸಾವಿರ ರೂಪಾಯಿಗಳಿಗಿಂತ ಹೆಚ್ಚಿನ ವಹಿವಾಟುಗಳು ಪ್ರತಿ ವಹಿವಾಟಿಗೆ ಐದು ರೂಪಾಯಿಗಳ ಸ್ಥಿರ ವ್ಯಾಪಾರಿ ರಿಯಾಯಿತಿ ದರವನ್ನು ಆಕರ್ಷಿಸುತ್ತವೆ.

ಎರಡು ಸಾವಿರ ರೂಪಾಯಿಗಳಿಗಿಂತ ಹೆಚ್ಚಿನ ದೊಡ್ಡ ವ್ಯಾಪಾರಿ ವಹಿವಾಟುಗಳು ಮಾತ್ರ ವ್ಯಾಪಾರಿಗಳು ಭರಿಸಬೇಕಾದ ೦.೪ ಪ್ರತಿಶತದಷ್ಟು MDR ಅನ್ನು ಆಕರ್ಷಿಸುತ್ತವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

---

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಅವರು ಇಂದು ಥಿಂಪುವಿನಲ್ಲಿ ಭೂತಾನ್ ಪ್ರಧಾನಿ ತ್ಸೆರಿಂಗ್ ಟೋಬ್ಗೆ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ನಂತರ, ಸಚಿವ ಡಾ. ಎಸ್.ಜೈಶಂಕರ್ ಅವರು ಭಾರತದಲ್ಲಿ ತಯಾರಾದ ೫೪ ಎಲೆಕ್ಟ್ರಿಕ್ ವಾಹನಗಳನ್ನು ಭೂತಾನ್ ಪ್ರಧಾನಿಗೆ ಹಸ್ತಾಂತರಿಸಿದರು.

ಭೂತಾನ್‌ನ ವಿದ್ಯುತ್ ಚಾಲಿತ ವಾಹನಗಳ ಬಳಕೆ ಮತ್ತು ಸುಸ್ಥಿರ ಸಾರಿಗೆಯ ಪ್ರಗತಿಗೆ ಭಾರತ ಬೆಂಬಲ ನೀಡುತ್ತಿದೆ. ಭೂತಾನ್‌ನ ಪ್ರಗತಿ ಮತ್ತು ಸಮೃದ್ಧಿಗೆ ಭಾರತ ದೃಢವಾದ ಬದ್ಧತೆ ಹೊಂದಿದೆ ಎಂದು ಸಚಿವ ಡಾ. ಎಸ್.ಜೈಶಂಕರ್ ಹೇಳಿದ್ದಾರೆ.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ೭೫ನೇ ಜನ್ಮದಿನದ ಅಂಗವಾಗಿ ದೇಶ-ವಿದೇಶಗಳ ನಾಯಕರು ಅವರಿಗೆ ಶುಭಾಶಯ ಕೋರಿದ್ದಾರೆ.

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಪ್ರಧಾನಿ ಮೋದಿ ಅವರಿಗೆ ಶುಭಾಶಯ ಕೋರಿದ್ದು, ಭಾರತ-ರಷ್ಯಾ ನಡುವಿನ ವಿಶೇಷ ಹಾಗೂ ಸವಲತ್ತು ಹೊಂದಿದ ವ್ಯೂಹಾತ್ಮಕ ಸಹಭಾಗಿತ್ವವನ್ನು ಬಲಪಡಿಸುವಲ್ಲಿ ಪ್ರಧಾನಿ ಮೋದಿ ಅವರ ಕೊಡುಗೆಯನ್ನು ಶ್ಲಾಘಿಸಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪರವಾಗಿ ಭಾರತದಲ್ಲಿರುವ ಅಮೆರಿಕ ರಾಯಭಾರ ಕಚೇರಿಯೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಿದೆ.

ಜಪಾನ್ ರಾಯಭಾರಿ ಓನೋ ಕೆಯಿಚಿ ಅವರು, ವಿಕಸಿತ ಭಾರತ ನಿರ್ಮಾಣದ ದೃಷ್ಟಿಕೋನವನ್ನು ಮುನ್ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಶ್ಲಾಘಿಸಿದ್ದಾರೆ.

ಆಸ್ಟ್ರೇಲಿಯಾ ಹೈಕಮಿಷನರ್ ಫಿಲಿಪ್ ಗ್ರೀನ್ ಅವರು ಪ್ರಧಾನಿ ಮೋದಿ ಅವರ ಇತ್ತೀಚಿನ ಆಸ್ಟ್ರೇಲಿಯಾ ಭೇಟಿಯ ಸಂದರ್ಭದಲ್ಲಿ ಆತ್ಮೀಯತೆ ಹಾಗೂ ಉಭಯ ದೇಶಗಳ ಜನರ ನಡುವಿನ ಬಲವಾದ ಬಾಂಧವ್ಯವನ್ನು ಸ್ಮರಿಸಿದ್ದಾರೆ.

ಸ್ಲೊವಾಕ್ ರಾಯಭಾರಿ ರಾಬರ್ಟ್ ಮ್ಯಾಕ್ಸಿಯನ್ ಅವರು ಕೂಡ ಪ್ರಧಾನಿ ಮೋದಿ ಅವರಿಗೆ ಜನ್ಮದಿನದ ಶುಭಾಶಯ ಕೋರಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಅವರ ಸಂಸತ್ ಕ್ಷೇತ್ರವಾದ ವಾರಾಣಸಿಯಲ್ಲಿ ಇಂದು ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಬಿಜೆಪಿ ಕಾರ್ಯಕರ್ತರು ರಕ್ತದಾನ ಶಿಬಿರಗಳನ್ನು ಏರ್ಪಡಿಸಿದ್ದರು. ಸ್ವಚ್ಛತಾ ಅಭಿಯಾನಗಳನ್ನು ಕೈಗೊಂಡರು ಹಾಗೂ ಸಾರ್ವಜನಿಕರಿಗೆ ಹಣ್ಣು ಮತ್ತು ಸಿಹಿ ತಿಂಡಿಗಳನ್ನು ವಿತರಿಸಿದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ವಾರಾಣಸಿಯಲ್ಲಿ ಕಾಶಿ ವಿಶ್ವನಾಥನಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಮತ್ತು ಉತ್ತರ ಪ್ರದೇಶ ಬಿಜೆಪಿ ಅಧ್ಯಕ್ಷ ಪಂಕಜ್ ಚೌಧರಿ ಉಪಸ್ಥಿತರಿದ್ದರು.

ಪ್ರಧಾನಿ ನರೇಂದ್ರ ಮೋದಿ ಅವರ ದೀರ್ಘಾಯುಷ್ಯ ಮತ್ತು ಉತ್ತಮ ಆರೋಗ್ಯಕ್ಕಾಗಿ ಹಾಗೂ ’ಅಭಿವೃದ್ಧಿಶೀಲ ಭಾರತ’ದಿಂದ ’ಅಭಿವೃದ್ಧಿ ಹೊಂದಿದ ಭಾರತ’ವಾಗುವ ಗುರಿ ಸಾಧಿಸಲಿ ಎಂದು ಪ್ರಾರ್ಥಿಸಿರುವುದಾಗಿ ಇದೇ ವೇಳೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದರು.

---

ಪ್ರಧಾನಿ ನರೇಂದ್ರ ಮೋದಿ ಅವರ ೭೫ನೇ ಜನ್ಮದಿನದ ಅಂಗವಾಗಿ, ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಇಂದು ಹುಬ್ಬಳ್ಳಿಯ ವಿವಿಧ ದೇವಾಲಯಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತವನ್ನು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಪರಿವರ್ತಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ. ಪ್ರಧಾನಿ ಮೋದಿ ಸರ್ಕಾರದ ಅವಧಿಯಲ್ಲಿ ಸುಮಾರು ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಹೇಳಿದರು.

ಧ್ವನಿ - ಬಸವರಾಜ ಬೊಮ್ಮಾಯಿ

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಇಂದಿನಿಂದ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ನಡೆಯುತ್ತಿದೆ.

ಜನಸೇವೆಯೇ ದೇಶ ಸೇವೆ ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನ ದೂರದೃಷ್ಟಿಯೊಂದಿಗೆ ಸರ್ಕಾರ ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಯತ್ತ ಸಾಗುತ್ತಿದೆ.

ಎಲ್ಲರನ್ನು ಒಳಗೊಂಡ ಅಭಿವೃದ್ಧಿ ಮತ್ತು ಸಾಮಾಜಿಕ ಸಬಲೀಕರಣದ ಮೂಲಕ ದೇಶದ ಜನರ ಜೀವನದಲ್ಲಿ ಮಹತ್ವದ ಪರಿವರ್ತನೆ ತರಲಾಗುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ.

ಇಂದು ಬಾಹ್ಯಾಕಾಶ ವಲಯದಲ್ಲಿ ಕೈಗೊಂಡ ಸುಧಾರಣೆಗಳ ಒಂದು ನೋಟ ಇಲ್ಲಿದೆ.

ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ೨೦೨೦ರಲ್ಲಿ ಕೇಂದ್ರ ಸರ್ಕಾರ ಕೈಗೊಂಡ ಮಹತ್ವದ ಸುಧಾರಣೆಗಳ ಪರಿಣಾಮ ಖಾಸಗಿಯವರಿಗೂ ಬಾಹ್ಯಾಕಾಶ ವಲಯದಲ್ಲಿ ಮುಕ್ತ ಅವಕಾಶ ದೊರೆತಿದೆ.

ಖಾಸಗಿ ವಲಯದ ಬಾಹ್ಯಾಕಾಶ ಚಟುವಟಿಕೆಗಳನ್ನು ಉತ್ತೇಜಿಸಲು ಮತ್ತು ಬೆಂಬಲಿಸಲು ಇನ್ ಸ್ಪೇಸ್ ಎಂಬ ಸ್ವತಂತ್ರ ಸಂಸ್ಥೆಯನ್ನು ಹುಟ್ಟುಹಾಕಲಾಯಿತು. ಅನಂತರ ೨೦೨೩ರಲ್ಲಿ ಭಾರತದ ಬಾಹ್ಯಾಕಾಶ ನೀತಿಯನ್ನು ಪ್ರಕಟಿಸಲಾಯಿತು. ಉಪಗ್ರಹಗಳ ಉಡಾವಣೆ ಸೇರಿದಂತೆ ಎಲ್ಲ ಚಟುವಟಿಕೆಗಳನ್ನು ಖಾಸಗಿ ಸಂಸ್ಥೆಗಳಿಗೆ ಮುಕ್ತಗೊಳಿಸಲಾಯಿತು.

೨೦೧೪ರ ವರೆಗೆ ಭಾರತದಲ್ಲಿ ಒಂದೇ ಒಂದು ಬಾಹ್ಯಾಕಾಶ ನವೋದ್ಯಮವಿತ್ತು. ಇದೀಗ ೨೦೨೬ರಲ್ಲಿ ಸುಮಾರು ೪೪೦ ಬಾಹ್ಯಾಕಾಶ ತಂತ್ರಜ್ಞಾನ ನವೋದ್ಯಮಗಳು ನೋಂದಣಿಯಾಗಿದ್ದು, ಅವುಗಳ ಬಂಡವಾಳ ಹೂಡಿಕೆ ೬೧೮ ಮಿಲಿಯನ್ ದಾಟಿದೆ.

ಪ್ರಮುಖವಾಗಿ, ಕಳೆದ ಜುಲೈ ೧೮ರಂದು ಖಾಸಗಿಯವರು ನಿರ್ಮಿಸಿದ ಮೊದಲ ಭಾರತೀಯ ರಾಕೆಟ್‌ನಿಂದ ಸ್ಕೈರೂಟ್ ಏರೋಸ್ಪೇಸ್ ವಿಕ್ರಮ್-೧ ಯಶಸ್ವಿ ಉಡಾವಣೆಯಾಗಿದೆ.

---

ಪ್ರಾಥಮಿಕ ಶಿಕ್ಷಕರ ಶಿಕ್ಷಣದಲ್ಲಿ ಆರು ತಿಂಗಳ ಸೇತುಬಂಧ ಕಾರ್ಯಕ್ರಮಕ್ಕೆ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿಂದು ಚಾಲನೆ ನೀಡಿದರು.

ಈ ಕಾರ್ಯಕ್ರಮವನ್ನು ಪದವಿ ಶಿಕ್ಷಣ ಪಡೆದಿರುವ ಸೇವೆಯಲ್ಲಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ ವಿನ್ಯಾಸಗೊಳಿಸಲಾಗಿದೆ. ಪ್ರಾಥಮಿಕ ಹಂತದಲ್ಲಿ ಕಲಿಸಲು ಅಂತಹ ಶಿಕ್ಷಕರು ಪ್ರಮಾಣೀಕರಣವನ್ನು ಪಡೆಯಲು ಈ ಕೋರ್ಸ್ ನಿರ್ಣಾಯಕ ಮಾರ್ಗವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಶಿಕ್ಷಣ ಸಚಿವಾಲಯ ತಿಳಿಸಿದೆ.

ಈ ವಿಶೇಷ ವೃತ್ತಿಪರ ಅಭಿವೃದ್ಧಿ ಕಾರ್ಯಕ್ರಮವು ಪ್ರಾಥಮಿಕ ಹಂತದಲ್ಲಿ ಕಲಿಯುವವರಿಗೆ ಪರಿಣಾಮಕಾರಿಯಾಗಿ ಶಿಕ್ಷಣ ನೀಡಲು ಅಗತ್ಯವಾದ ಕೌಶಲ್ಯ ಮತ್ತು ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸಲು ಶಿಕ್ಷಕರಿಗೆ ಸಹಾಯ ಮಾಡಲು ಸಮಗ್ರ ತರಬೇತಿಯನ್ನು ನೀಡುತ್ತದೆ. ಸೇತುಬಂಧ ಕಾರ್ಯಕ್ರಮವನ್ನು ರಾಷ್ಟ್ರೀಯ ಮುಕ್ತ ಶಾಲಾ ಸಂಸ್ಥೆ ಮೂಲಕ ಕಾರ್ಯಗತಗೊಳಿಸಲಾಗುತ್ತದೆ ಮತ್ತು ಶಿಕ್ಷಕರನ್ನು ಮಕ್ಕಳ ಕೇಂದ್ರಿತ, ಅಂತರ್ಗತ ಮತ್ತು ಅಭಿವೃದ್ಧಿ-ಸೂಕ್ಷ್ಮ ಬೋಧನಾ ಅಭ್ಯಾಸಗಳೊಂದಿಗೆ ಸಜ್ಜುಗೊಳಿಸುತ್ತದೆ.

ಈ ಕಾರ್ಯಕ್ರಮವು ಬೋಧನೆಯನ್ನು ಕ್ರಿಯಾತ್ಮಕ, ಸಂದರ್ಭ-ಸೂಕ್ಷ್ಮ ಮತ್ತು ವಿಚಾರಣಾ-ಆಧಾರಿತ ವೃತ್ತಿಯಾಗಿ ಉತ್ತೇಜಿಸುತ್ತದೆ. ಅಲ್ಲದೇ ಮೂಲಭೂತ ಕಲಿಕೆಯ ತತ್ವಗಳನ್ನು ಗುರಿಯಾಗಿಟ್ಟುಕೊಂಡು ಸೈದ್ಧಾಂತಿಕ ಮತ್ತು ಪ್ರಾಯೋಗಿಕ ಅಂಶಗಳನ್ನು ಒಳಗೊಂಡಿದೆ. ಕೋರ್ಸ್‌ಗೆ ಪ್ರವೇಶವು ರಾಷ್ಟ್ರೀಯ ಮುಕ್ತ ಶಾಲಾ ಸಂಸ್ಥೆಯ ಸೇತುಬಂಧ ಕಾರ್ಯಕ್ರಮದ ಅಧಿಕೃತ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿರುತ್ತದೆ ಎಂದು ಶಿಕ್ಷಣ ಸಚಿವಾಲಯ ತಿಳಿಸಿದೆ.

---

ಕಳೆದ ಹನ್ನೆರಡು ವರ್ಷಗಳಲ್ಲಿ ದೇಶದಲ್ಲಿ ಡಾಪ್ಲರ್ ಹವಾಮಾನ ರೇಡಾರ್‌ಗಳ ಸಂಖ್ಯೆ ಹದಿನಾಲ್ಕರಿಂದ ಐವತ್ತೊಂದಕ್ಕೆ ಏರಿಕೆಯಾಗಿದೆ ಎಂದು ಕೇಂದ್ರ ಭೂವಿಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

ಒಡಿಶಾದ ಸಂಬಲ್‌ಪುರದಲ್ಲಿ ಭಾರತದ ೫೧ನೇ ಅತ್ಯಾಧುನಿಕ ಡಾಪ್ಲರ್ ಹವಾಮಾನ ರೇಡಾರ್ ಅನ್ನು ವರ್ಚುವಲ್ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, 'ಮಿಷನ್ ಮೌಸಮ್' ಅಡಿಯಲ್ಲಿ ಇನ್ನೂ ಸುಮಾರು ನಲವತ್ತು ರೇಡಾರ್‌ಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಗುಡುಗು, ಸಿಡಿಲು, ಭಾರಿ ಮಳೆ ಮತ್ತು ಹವಾಮಾನ ಸಂಬಂಧಿತ ಇತರ ಅಪಾಯಗಳಿಗೆ ತುತ್ತಾಗುವ ಪ್ರದೇಶಗಳಿಗೆ ಸುಧಾರಿತ ವೀಕ್ಷಣಾ ಸಾಮರ್ಥ್ಯಗಳು ಅತ್ಯಂತ ಮುಖ್ಯವಾಗಿವೆ.

ಸರ್ಕಾರವು ಏಕಕಾಲದಲ್ಲಿ ಭೂ-ಆಧಾರಿತ ಹವಾಮಾನ ವೀಕ್ಷಣಾ ವ್ಯವಸ್ಥೆಗಳ ಜಾಲವನ್ನೂ ವಿಸ್ತರಿಸುತ್ತಿದೆ ಎಂದರು.

ಸಮಗ್ರ ಮತ್ತು ಬಹು-ಹಂತದ ಹವಾಮಾನ ವೀಕ್ಷಣಾ ಜಾಲವನ್ನು ನಿರ್ಮಿಸುವ ಪ್ರಯತ್ನದ ಭಾಗವಾಗಿ, ಮೇಲ್ಮೈ ಹವಾಮಾನ ವೀಕ್ಷಣಾ ಕೇಂದ್ರಗಳು ಮತ್ತು ಮೈಕ್ರೋವೇವ್ ರೇಡಿಯೋಮೀಟರ್‌ಗಳಂತಹ ಸುಧಾರಿತ ವೀಕ್ಷಣಾ ವ್ಯವಸ್ಥೆಗಳನ್ನು ಅಳವಡಿಸುತ್ತಿದೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

______________________

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್‌ನ ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮೂರು ಪಂದ್ಯಗಳ ಸರಣಿಯ ಅಂತಿಮ ಪಂದ್ಯ ಪ್ರಗತಿಯಲ್ಲಿದೆ.

ಟಾಸ್ ಗೆದ್ದ ಅಫ್ಘಾನಿಸ್ತಾನ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

__________ ಮುಕ್ತಾಯ ___________